ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಷ್ಟ್ರೀಯ ಸ್ವಯಂಸೇವಕ ಸಂಘದ ವಿವರಣೆಯ ಬಗ್ಗೆ

ಶ್ರೀ ಬಿ. ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

917(1114) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಷ್ಟ್ರೀಯ ಸ್ವಯಂಸೇವಕ ಸಂಘದ ವಿರುದ್ಧ ಸರ್ಕಾರಕ್ಕೆ ದೂರುಗಳು ಬಂದಿವೆಯೇ ;

(ಆ) ರಾಷ್ಟ್ರೀಯ ಸ್ವಯಂಸೇವಕ ಸಂಘ ನೋಂದಣಿಯಾಗಿದೆಯೇ; ಸದಸ್ಯತ್ವದ ಪಟ್ಟಿ ಸರ್ಕಾರಕ್ಕೆ ಸಲ್ಲಿಸಿ ಸಂವಿಧಾನ ಬದ್ಧವಾಗಿ ಪ್ರತಿ ಮೂರು ವರ್ಷಗಳಿಗೊಮ್ಮೆ ಸಂಘದ ಚುನಾವಣೆ ನಡೆಯುತ್ತಿದೆಯೇ ಮತ್ತು ವಾರ್ಷಿಕ ಲೆಕ್ಕ ಪತ್ರ ಸರ್ಕಾರಕ್ಕೆ ಸಲ್ಲಿಕೆಯಾಗುತ್ತಿದೆಯೇ;

(ಇ) ಸದರಿ ಸಂಘಟನೆಯು ರಾಜ್ಯದಲ್ಲಿ ಸ್ವಂತ ಅಥವಾ ಬಾಡಿಗೆ ಕಛೇರಿ ಹೊಂದಿದೆಯೇ;

(ಈ) ವಿಳಾಸವೇ ಇಲ್ಲದ, ನೋಂದಣಿಯಾಗದ, ಸದಸ್ಯತ್ವದ ಪಟ್ಟಿ ಸಲ್ಲಿಸದ, ಸಂವಿಧಾನ ಬದ್ಧವಾಗಿ ಚುನಾವಣೆ ನಡೆಸದ, ಸಂಘಟನೆಯ ಆದಾಯ, ಖರ್ಚು ವೆಚ್ಚಗಳ ಬಗ್ಗೆ ಸರ್ಕಾರಕ್ಕೆ ಉತ್ತರದಾಯಿತ್ವ ಸಲ್ಲಿಸದ ಸಂಘಟನೆಗಳು ಸರ್ಕಾರಕ್ಕೆ ಅರ್ಥಾತ್ ಸಮಾಜಕ್ಕೆ ವಂಚಿಸಿದಂತಿದ್ದು ಸಮಾಜಹಿತ ಕಾಪಾಡಬಲ್ಲರೇ ?